ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 16-08-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕರ್ನಾಟಕ ವಿಧಾನಸಭೆಯ ಅಂದಾಜುಗಳ ಸಮಿತಿಯ ಪ್ರಾರಂಭಿಕ ಸಭೆ<br>ಅಧ್ಯಕ್ಷತೆ:<br>ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್, ಅಧ್ಯಕ್ಷರು, ಕರ್ನಾಟಕ ವಿಧಾನಸಭೆ ಅಂದಾಜುಗಳ ಸಮಿತಿ, | 17-08-2016<br>ಬುಧವಾರ<br>ಬೆಳಿಗ್ಗೆ<br>11-00 ಗಂಟೆಗೆ | ವಿಧಾನಸಭೆಯ ಪೂರ್ವ ಮೊಗಸಾಲೆ, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು. |
| 2. | ಕನ್ನಡ – ಸಂಸ್ಕೃತಿ ಯುವಜನೋತ್ಸವ :<br>ಉದ್ಘಾಟನೆ:<br>ಡಾ. ಎಲ್. ಹನುಮಂತಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, | 17-08-2016<br>ಬುಧವಾರ<br>ಮಧ್ಯಾಹ್ನ<br>1-00 ಗಂಟೆಗೆ | ಸಿಂಧಿ ಮಹಾವಿದ್ಯಾಲಯ, ಕೆಂಪಾಪುರ, ಹೆಬ್ಬಾಳ, ಬೆಂಗಳೂರು – 560 024 |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ದಿವಂಗತ ದೇವರಾಜ ಅರಸುರವರ 101ನೇ ಜನ್ಮ ದಿನಾಚರಣೆ

ಬೆಂಗಳೂರು, ಆಗಸ್ಟ್ 16 (ಕರ್ನಾಟಕ ವಾರ್ತೆ)

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ದಿವಂಗತ ದೇವರಾಜ ಅರಸು ಜನ್ಮ ಶತಮಾನೋತ್ಸವ ಸಮಿತಿಯ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 20 ರಂದು ಬೆಳಿಗ್ಗೆ 11–00 ಗಂಟೆಗೆ ನಗರದ ಕಂಠೀರವ ಒಳಾಂಗಣ ಕ್ರೀಡಾಂಗಣ, ಬೆಂಗಳೂರು ಇಲ್ಲಿ ದಿವಂಗತ ದೇವರಾಜ ಅರಸುರವರ 101ನೇ ಜನ್ಮ ದಿನಾಚರಣೆ ಹಾಗೂ ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ

ಅಂದು ಬೆಳಿಗ್ಗೆ 10.40 ಗಂಟೆಗೆ ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ಡಿ. ದೇವರಾಜ ಅರಸು ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೇರಿದಂತೆ ಅನೇಕ ಗಣ್ಯರು ಮಾಲಾರ್ಪಣೆ ಮಾಡಲಿದ್ದಾರೆ.

ಈ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಸಮಾರಂಭದ ಅಧ್ಯಕ್ಷತೆಯನ್ನು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ವಹಿಸುವರು.

ಸಮಾರಂಭದಲ್ಲಿ ಕೇಂದ್ರದ ಸಚಿವರು, ರಾಜ್ಯ ಸಚಿವರು ವಿಧಾನಸಭೆ ಅಧ್ಯಕ್ಷರು, ಕರ್ನಾಟಕ ವಿಧಾನ ಪರಿಷತ್ ಸಭಾಪತಿಯವರು ಸೇರಿದಂತೆ ವಿಧಾನಸಭೆ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ಲೋಕಸಭೆ ಹಾಗೂ ರಾಜಸಭಾ ಸದಸ್ಯರು ಸೇರಿದಂತೆ ಅನೇಕ ಗಣ್ಯರು ಪಾಲ್ಗೊಳ್ಳುವರು.

ಬಾಬು:ಜಿಪಿಆರ್